# ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿ ರವರ ನ್ಯಾಯಾಲಯ, ಯಳಂದೂರು.

**C.C No.** 73/2019

| | | |
|---|---|---|
| ಸಾಕ್ಷಿದಾರರ ಹೆಸರು: | ರಂಗರಾಜು | ಪ್ರಮಾಣ ಮಾಡಿದ ದಿನಾಂಕ 09.09.2026. |
| ತಂದೆಯ ಹೆಸರು: | ರಂಗಸ್ವಾಮಿ | |
| ವಯಸ್ಸು: | 34 ವರ್ಷ | |
| ವೃತ್ತಿ: | ಕೂಲಿ ಕೆಲಸ | CW−1 |
| ವಾಸಸ್ಥಳ: | ಹೊನ್ನೂರು | PW−1 |

## ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ

ಈ ಪ್ರಕರಣದ ಆರೋಪಿತರು ಗೊತ್ತು. ಅವರು ನಮ್ಮ ಅಕ್ಕಪಕ್ಕದ ಮನೆಯವರು. ಈಗ ಸುಮಾರು 8 ವರ್ಷಗಳ ಹಿಂದೆ ಸಣ್ಣಪುಟ್ಟ ವಿಚಾರವಾಗಿ ನಮ್ಮ ಮತ್ತು ಆರೋಪಿತರ ನಡುವೆ ಕೇವಲ ಬಾಯಿ ಮಾತಿನ ಜಗಳವಾಗಿರುತ್ತದೆ. ಕೇವಲ ಬಾಯಿ ಮಾತಿನ ಜಗಳವನ್ನು ಹೊರತುಪಡಿಸಿದರೆ ಇನ್ನೇನು ಆಗಿರುವುದಿಲ್ಲ. ಆರೋಪಿತರು ನಮ್ಮ ಮೇಲೆ ಯಾವುದೇ ಅಪರಾಧಿಕ ಕೃತ್ಯಗಳನ್ನು ಮಾಡಿರುವುದಿಲ್ಲ.

ನಾನು ಈ ವಿಚಾರವನ್ನು ಪೊಲೀಸರಿಗೆ ತಿಳಿಸಲು ಹೋದಾಗ ಅವರ ಕೋರಿಕೆಯ ಮೇರೆಗೆ 2 ದಾಖಲಾತಿಗಳಿಗೆ ಸಹಿ ಮಾಡಿರುತ್ತೇನೆ. ಸಾಕ್ಷಿಯು ಸದರಿ ದಾಖಲಾತಿಗಳನ್ನು ನೋಡಿ ಗುರುತಿಸಿರುತ್ತಾರೆ. ಆ ದಾಖಲಾತಿಗಳು ಪ್ರಥಮ ಮಾಹಿತಿ ಹೇಳಿಕೆ ಹಾಗೂ ಮಹಜರ್ ಆಗಿರುತ್ತದೆ. ಸಾಕ್ಷಿಯು ಸದರಿ ದಾಖಲಾತಿಗಳಲ್ಲಿರುವ ತಮ್ಮ ಸಹಿಗಳನ್ನು ನೋಡಿ ಗುರುತಿಸಿರುತ್ತಾರೆ ಆದ್ದರಿಂದ ಪ್ರಥಮ ಹೇಳಿಕೆಯನ್ನು ನಿಪಿ-1, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ- 1(ಎ), ಮಹಜರ್ ನಿಪಿ-2, ಹಾಗೂ ದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-

2(ಎ) ಎಂದು ಗುರುತಿಸಲಾಯಿತು. ನಿಪಿ-1 ಮತ್ತು 2 ರಲ್ಲಿ ಏನು ಬರೆದಿದೆ ನನಗೆ ಗೊತ್ತಿಲ್ಲ. ನನ್ನನ್ನು ಪೊಲೀಸರು ವಿಚಾರಣೆ ಮಾಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಗಿದೆ.)

**<u>ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದ</u>**

ದಿನಾಂಕ 25.11.2018 ರಂದು ರಾತ್ರಿ 07 ಗಂಟೆ ಸಮಯದಲ್ಲಿ ಆರೋಪಿ 1 ರವರು ತನ್ನ ಮಗನ ಜೊತೆ ಗಲಾಟೆ ಮಾಡುತ್ತಿದ್ದಾಗ ನಾನು ಯಾಕೆ ಗಲಾಟೆ ಮಾಡುತ್ತಿದ್ದೀಯಾ ಎಂದು ಬುದ್ದಿ ಮಾತು ಹೇಳಿದ್ದಕ್ಕೆ ಆರೋಪಿ 1 ರವರು ನನ್ನನ್ನು ಕೇಳಲು ನೀನು ಯಾರು ಎಂದು ಇದು ನಮ್ಮ ಮನೆಯ ವಿಚಾರ ಎಂದು ಹೇಳಿರುತ್ತಾರೆ ಎಂದರೆ ಸರಿಯಲ್ಲ. ಸದರಿ ದಿನ ರಾತ್ರಿ 9.00 ಗಂಟೆಯಲ್ಲಿ ಹಳ್ಳಗಟ್ಟ ಕೆರೆಯ ಪಕ್ಕದಲ್ಲಿ ಬಹಿರ್ದೆಸೆಗೆ ಹೋಗಿಬರುತ್ತಿದ್ದಾಗ ಆರೋಪಿ 1 ರವರು ಸದರಿ ವಿಚಾರವಾಗಿ ನನ್ನ ಜೊತೆ ಗಲಾಟೆ ಮಾಡಿ ಆರೋಪಿ 2 ರಿಂದ 4 ರವರ ಜೊತೆ ಸೇರಿಕೊಂಡು ನನ್ನನ್ನು ಅಡ್ಡಗಟ್ಟಿ ತಬ್ಬಿ ಹಿಡಿದುಕೊಂಡಾಗ ಆರೋಪಿ 4 ರವರು ಕಬ್ಬಿಣದ ರಾಡಿನಿಂದ ನನ್ನ ತಲೆಗೆ ಹೊಡೆದು ನೋವುಂಟುಪಡಿಸಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿ 1 ರಿಂದ 4 ರವರುಗಳು ಸೇರಿಕೊಂಡು ನನಗೆ ಕಾಲಿನಿಂದ ಒದ್ದು ತುಳಿದಿರುತ್ತಾರೆ ಎಂದರೆ ಸರಿಯಲ್ಲ. ಈ ವಿಚಾರವಾಗಿ ನಾನು ನಿಪಿ- 1 ರಂತೆ ದೂರು ನೀಡಿರುತ್ತೇನೆ ಎಂದರೆ ಸರಿಯಲ್ಲ.

ದಿನಾಂಕ 02.12.2018 ರಂದು ಮಧ್ಯಾಹ್ನ 12.00-13.00 ಗಂಟೆಯವರೆಗೆ ಕೃತ್ಯ ನಡೆದ ಸ್ಥಳದಲ್ಲಿ ನಾನು ಸ್ಥಳ ತೋರಿಸಿದ ಮೇರೆಗೆ ಚಾಸಾ-6 ಮತ್ತು 7 ರವರ ಸಮಕ್ಷಮ ನಿಪಿ-2 ರಂತೆ ಪಂಚನಾಮೆಯನ್ನು ಮಾಡಿ ನ್ಯಾಯಾಲಯದ ಮುಂದಿರುವ ಕಬ್ಬಿಣದ ರಾಡನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-2 ನ್ನು ನನಗೆ ಓದಿ ಹೇಳಿರುತ್ತಾರೆ ಎಂದರೆ ಸರಿಯಲ್ಲ. ನಂತರ ನಾನು ಅದಕ್ಕೆ ಸಹಿಯನ್ನು ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿತರೊಂದಿಗೆ ಈಗ ರಾಜಿ ಮಾಡಿಕೊಂಡಿರುತ್ತೇನೆ ಎಂದರೆ ನಿಜ. ರಾಜಿ ಮಾಡಿಕೊಂಡ

ಕಾರಣ ಆರೋಪಿತರನ್ನು ಶಿಕ್ಷೆಯಿಂದ ಪಾರು ಮಾಡುವ ಉದ್ದೇಶದಿಂದ ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

(ಪಾಟೀ ಸವಾಲು: ಆರೋಪಿ ಪರ ವಕೀಲರರು ಪಾಟೀ ಸವಾಲು ಇರುವುದಿಲ್ಲ ಎಂದು ನುಡಿದಿರುತ್ತಾರೆ)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದ ನ್ಯಾಯಾಲಯ ಯಳಂದೂರು.